All India Radio: Bangalore
Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

25.12.2025 6.40 p.m.

***************

ಮುಖ್ಯಾಂಶಗಳು

- ಕಾರ್ಮಿಕರ ಪರವಾಗಿ ನೂತನ ಕಾರ್ಮಿಕ ಸಂಹಿತೆಗಳು- ಕೇಂದ್ರ ಸಚಿವ ಶೋಭಾ ಕರಂದ್ಲಾಜೆ
- ಪ್ರಯಾಣಿಕರ ಹಿತದೃಷ್ಟಿಯಿಂದ ಸ್ಲೀಪರ್ ಕೋಚ್ ಬಸ್‌ಗಳಲ್ಲಿ ಕಡ್ಡಾಯ ಸುರಕ್ಷತಾ ಮಾರ್ಗಸೂಚಿ ಜಾರಿಗೊಳಿಸುವಂತೆ ರಾಜ್ಯ ಸರ್ಕಾರಕ್ಕೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಒತ್ತಾಯ
- ಮಾಜಿ ಪ್ರಧಾನಿ, ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿ ಜನ್ಮದಿನದ ಅಂಗವಾಗಿ ರಾಜ್ಯದ ವಿವಿಧೆಡೆ ಸೇವಾಕಾರ್ಯ
- ರಾಜ್ಯಾದ್ಯಂತ ಕ್ರಿಸ್‌ಮಸ್ ಹಬ್ಬ ಆಚರಣೆ; ಸಿಹಿ ಹಂಚಿ ಸಂಭ್ರಮ

***************

ಕಾರ್ಮಿಕರಿರುವುದು ಒಂದು ಸಂಸ್ಥೆಯ ಏಳಿಗೆಗೆ ವಿನಃ ಸಂಘರ್ಷಕ್ಕಲ್ಲ. ಸಂಘರ್ಷದಿಂದಾಗಿ ಆ ಸಂಸ್ಥೆಗೆ ಪೆಟ್ಟು ಬೀಳುತ್ತದೆ ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಹೇಳಿದ್ದಾರೆ.

ಬೆಂಗಳೂರಿನ ಮಲ್ಲೇಶ್ವರಂ ಸುವರ್ಣ ಭವನದಲ್ಲಿ ಆಯೋಜಿಸಿದ್ದ ನೂತನ ಕಾರ್ಮಿಕ ಸಂಹಿತೆಗಳು ೨೦೨೫, ಕಾರ್ಮಿಕರ ಸಬಲೀಕರಣ ಮತ್ತು ಪಾರದರ್ಶಕತೆಯನ್ನು ಖಚಿತಪಡಿಸುವ, ಉದ್ಯಮವನ್ನು ಬಲಪಡಿಸುವುದರ ಕುರಿತು ನಡೆದ ಒಂದು ದಿನದ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಎಲ್ಲಾ ವರ್ಗದ ಕಾರ್ಮಿಕರ ಪರವಾಗಿ ಕೇಂದ್ರ ಸರ್ಕಾರ ಇದ್ದು, ಅವರಿಗೆ ಧೈರ್ಯ ನೀಡುವ ಕೆಲಸ ಮಾಡುತ್ತಿದೆ. ನೂತನ ಕಾರ್ಮಿಕ ಸಂಹಿತೆಗಳ ಬಗ್ಗೆ ಹೆಚ್ಚಿನ ಅರಿವನ್ನು ಮೂಡಿಸುವ ಕೆಲಸ ಮಾಡಬೇಕಿದೆ ಎಂದರು.

ಆಸ್ಪತ್ರೆಗಳಲ್ಲಿ ಕಾರ್ಮಿಕರಿಗೆ ವೈದ್ಯಕೀಯ ಖರ್ಚನ್ನು ಭರಿಸುವ ಕೆಲಸ ಕೇಂದ್ರ ಸರ್ಕಾರ ಮಾಡುತ್ತಿದೆ. ಎಲ್ಲಾ ಜಿಲ್ಲೆಗಳಲ್ಲಿ ಸೂಕ್ತ ಸಂಖ್ಯೆಯಲ್ಲಿ ಇಎಸ್‌ಐ ಆಸ್ಪತ್ರೆಗಳಿಲ್ಲ. ಆದ್ದರಿಂದ ಖಾಸಗಿ ಆಸ್ಪತ್ರೆಗಳಲ್ಲಿ ತಗಲುವ ವೆಚ್ಚವನ್ನು ಸಹ ಕೇಂದ್ರ ಸರ್ಕಾರ ಭರಿಸುತ್ತಿದೆ ಎಂದು ಸಚಿವೆ ಶೋಭಾ ಕರಂದ್ಲಾಜೆ ತಿಳಿಸಿದರು.

ಧ್ವನಿ: ಸಚಿವೆ ಶೋಭಾ ಕರಂದ್ಲಾಜೆ

***************

ರಾತ್ರಿ ವೇಳೆ ಸೇವೆ ಒದಗಿಸುವ ಸ್ಲೀಪರ್ ಕೋಚ್ ಬಸ್‌ಗಳಲ್ಲಿ ಪ್ರಯಾಣಿಕರ ಹಿತದೃಷ್ಟಿಯಿಂದ ಹೆಚ್ಚು ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವ ಸಂಬಂಧ ಮಾರ್ಗಸೂಚಿಗಳನ್ನು ರಾಜ್ಯ ಸರ್ಕಾರ ಕಡ್ಡಾಯ ಮಾಡಬೇಕು ಎಂದು ಕೇಂದ್ರ ಬೃಹತ್ ಕೈಗಾರಿಕಾ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ಒತ್ತಾಯಿಸಿದ್ದಾರೆ.

ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಿರಿಯೂರು ಬಳಿ ಕಳೆದ ರಾತ್ರಿ ನಡೆದ ಅಪಘಾತ ದುರದೃಷ್ಟಕರ. ಈ ರೀತಿಯ ಘಟನೆಗಳು ನಡೆಯಬಾರದು ಎಂದರು.

ಇಂಥಹ ದುರ್ಘಟನೆಗಳನ್ನು ತಡೆಯುವ ಸಂಬಂಧ ರಾಜ್ಯ ಸರ್ಕಾರ ಖಾಸಗಿ ಬಸ್ ಮಾಲೀಕರಿಗೆ ಕೆಲ ಮಾರ್ಗಸೂಚಿಗಳನ್ನು ವಿಧಿಸಬೇಕಿದೆ. ಅಪಾಯದ ಸಂದರ್ಭದಲ್ಲಿ ಪ್ರಯಾಣಿಕರು ಸುಲಭವಾಗಿ ಹೊರಗೆ ಬರುವಂತಹ ಸುರಕ್ಷತಾ ಮಾರ್ಗಗಳ ಬಗ್ಗೆ ಸೂಚನೆ ನೀಡಿ, ಅವುಗಳನ್ನು ಕಾರ್ಯರೂಪಕ್ಕೆ ತರಲು ಸರ್ಕಾರ ಗಮನ ಹರಿಸಬೇಕು ಎಂದು ಸಚಿವ ಎಚ್.ಡಿ.ಕುಮಾರಸ್ವಾಮಿ ಆಗ್ರಹಿಸಿದರು.

ಧ್ವನಿ: ಸಚಿವ ಎಚ್.ಡಿ.ಕುಮಾರಸ್ವಾಮಿ

***************

ಭಾರತದ ಮಾಜಿ ಪ್ರಧಾನಿ, ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿ ಅವರ ಜಯಂತಿ ಪ್ರಯುಕ್ತ ಯುವ ಮೋರ್ಚಾ ಕುಷ್ಟಗಿ ಮಂಡಲದ ವತಿಯಿಂದ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯ ರೋಗಿಗಳಿಗೆ ಹಣ್ಣು ಹಾಗೂ ಬ್ರೆಡ್‌ಗಳನ್ನು ವಿತರಿಸಲಾಯಿತು.

ಈ ವೇಳೆ ವಿಧಾನಸಭೆಯ ವಿರೋಧ ಪಕ್ಷದ ಮುಖ್ಯ ಸಚೇತಕ ದೊಡ್ಡನಗೌಡ ಪಾಟೀಲ, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಕೆ.ಮಹೇಶ್, ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಉಮೇಶ್ ಯಾದವ್ ಸೇರಿದಂತೆ ಪಕ್ಷದ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

ಹಾಸನ ಜಿಲ್ಲಾ ಬಿಜೆಪಿ ಘಟಕದ ವತಿಯಿಂದ ಜಿಲ್ಲಾ ಕಚೇರಿಯಲ್ಲಿ ಇಂದು ಮಾಜಿ ಪ್ರಧಾನಿ, ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿ ಅವರ ೧೦೧ನೇ ಜನ್ಮದಿನಾಚರಣೆ ಆಚರಿಸಲಾಯಿತು.

ಅಟಲ್ ಬಿಹಾರಿ ವಾಜಪೇಯಿ ಅವರ ಭಾವಚಿತ್ರಕ್ಕೆ ಗಣ್ಯರು ಪುಷ್ಪಾರ್ಚನೆ ಮಾಡಿದರು. ಬಳಿಕ ವಾಜಪೇಯಿ ಅವರ ಅವಧಿಯಲ್ಲಿ ಅವರ ಜೊತೆಗೆ ತೊಡಗಿಸಿಕೊಂಡ ಕಾರ್ಯಕರ್ತರಿಗೆ ಸನ್ಮಾನಿಸಿ, ಗೌರವಿಸಲಾಯಿತು.

ಈ ವೇಳೆ ಬಿಜೆಪಿ ಜಿಲ್ಲಾ ಕಾರ್ಯದರ್ಶಿ ಅಮಿತ್ ಶೆಟ್ಟಿ ಮಾತನಾಡಿ, ಅಟಲ್ ಬಿಹಾರಿ ವಾಜಪೇಯಿ ಅವರು ಚತುಷ್ಪಥ ರಸ್ತೆ, ಗ್ರಾಮ ಸಡಕ್ ಯೋಜನೆ ಸೇರಿದಂತೆ ಹಲವು ಜನಪರ ಕಾರ್ಯಕ್ರಮಗಳನ್ನು ಜಾರಿಗೊಳಿಸಿ, ಜನರ ಮನಸ್ಸಿನಲ್ಲಿ ಇಂದಿಗೂ ಜೀವಂತವಾಗಿದ್ದಾರೆ ಎಂದು ಹೇಳಿದರು.

ದಿವಂಗತ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರು ಭಾರತದ ಅಭಿವೃದ್ಧಿಗೆ ದಿಕ್ಸೂಚಿಯಂತೆ ಕೆಲಸ ನಿರ್ವಹಿಸಿದರು ಎಂದು ಬಿಜೆಪಿ ಜಿಲ್ಲಾ ವಕ್ತಾರ ಅಶೋಕ್ ಜೀರೆ ಹೇಳಿದರು.

ವಿಜಯನಗರ ಬಿಜೆಪಿ ಕಚೇರಿಯಲ್ಲಿ ಇಂದು ಹೊಸಪೇಟೆ ಮಂಡಲದ ವತಿಯಿಂದ ಆಯೋಜಿಸಲಾಗಿದ್ದ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ಶತಮಾನೋತ್ಸವದ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಇದೇ ವೇಳೆ ಹೊಸಪೇಟೆ ನಗರದ ಮಹಿಳಾ ಸಮಾಜ ಶಾಲೆಯಲ್ಲಿ ವಾಜಪೇಯಿ ಅವರ ಹೆಸರಿನಲ್ಲಿ ವಿದ್ಯಾರ್ಥಿಗಳಿಂದ ಸಸಿಗಳನ್ನು ನೆಡಲಾಯಿತು.

***************

ಕರ್ನಾಟಕದಾದ್ಯಂತ ಕ್ರಿಸ್‌ಮಸ್ ಹಬ್ಬವನ್ನು ಸಡಗರ, ಸಂಭ್ರಮದಿಂದ ಆಚರಿಸಲಾಯಿತು.

ಹಬ್ಬದ ಅಂಗವಾಗಿ ಚಿಕ್ಕಮಗಳೂರು ನಗರದ ಪ್ರಮುಖ ಚರ್ಚ್‌ಗಳನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿದೆ. ಕ್ರೈಸ್ತ ಸಮುದಾಯದವರು ಚರ್ಚ್‌ಗಳಿಗೆ ತೆರಳಿ ವಿಶೇಷ ಪ್ರಾಥನೆ ಸಲ್ಲಿಸಿದರು. ಜಿಲ್ಲೆಯ ಬಣಕಲ್, ಬಾಳೂರು, ಕೊಟ್ಟಿಗೆಹಾರಗಳಲ್ಲಿ ಕ್ರೈಸ್ತ ಬಾಂಧವರು, ಎಲ್ಲರಿಗೂ ಕೇಕ್ ಹಾಗೂ ಸಿಹಿ ಹಂಚಿ ಹಬ್ಬದ ಶುಭಾಶಯ ಕೋರಿದರು.

ಕ್ರಿಸ್ಮಸ್ ಹಬ್ಬವನ್ನು ಇಂದು ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಅತ್ಯಂತ ಸಂಭ್ರಮದಿಂದ ಆಚರಿಸಲಾಯಿತು. ನಗರದ ಬಿ.ಬಿ ರಸ್ತೆಯ ಸಂತ ಕ್ಸೇವಿಯರ್ ಚರ್ಚ್, ಸಿ.ಎಸ್.ಐ ಚರ್ಚ್ ಹಾಗೂ ಶತಮಾನಗಳ ಇತಿಹಾಸವಿರುವ ಶಿಡ್ಲಘಟ್ಟ ತಾಲೂಕಿನ ವೈ.ಹುಣಸೇನಹಳ್ಳಿ ಬಳಿಯ ಕಡಶಾನಹಳ್ಳಿಯ ಸಂತ ಜಾನರ ಚರ್ಚ್ ಸೇರಿದಂತೆ ವಿವಿಧ ಚರ್ಚ್‌ಗಳಲ್ಲಿ ಕ್ರೈಸ್ತ ಬಾಂಧವರು ಶ್ರದ್ಧಾ-ಭಕ್ತಿಯಿಂದ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಬೇಕರಿಗಳಲ್ಲಿ ವಿವಿಧ ವಿನ್ಯಾಸ ರುಚಿ, ಬಣ್ಣಗಳ ಸಿಹಿ ತಿಂಡಿ, ಕೇಕ್‌ಗಳ ಖರೀದಿ ಭರಾಟೆ ಜೋರಾಗಿತ್ತು. ಚರ್ಚ್‌ಗಳು ವರ್ಣರಂಜಿತ ವಿದ್ಯುತ್ ದೀಪಾಲಂಕಾರದಿಂದ ಕಂಗೊಳಿಸುತ್ತಿವೆ.. ಸಂಸದ ಡಾ.ಕೆ.ಸುಧಾಕರ್ ಸಿಎಸ್‌ಐ ಚರ್ಚ್‌ಗೆ ಭೇಟಿ ನೀಡಿ, ಕ್ರೈಸ್ತ ಬಾಂಧವರಿಗೆ ಹಬ್ಬದ ಶುಭಾಶಯ ಕೋರಿದರು.

***************

ಭಾರತೀಯ ಚುನಾವಣಾ ಆಯೋಗದ ನಿರ್ದೇಶನದಂತೆ ಬಾಗಲಕೋಟೆ ವಿಧಾನಸಭಾ ಮತಕ್ಷೇತ್ರದ ಉಪ ಚುನಾವಣೆಗೆ ಸಂಬಂಧಿಸಿದಂತೆ ಮತದಾರರ ಪಟ್ಟಿಯ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯ ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಸಂಗಪ್ಪ ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಹಾಗೂ ಮತಗಟ್ಟೆಗಳನ್ನು ಪುನರ್ ಸಂಘಟಿಸುವ ಕುರಿತು ವಿವಿಧ ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಾಗಲಕೋಟೆ ವಿಧಾನಸಭಾ ಮತಕ್ಷೇತ್ರದ ಮತದಾರರ ಪಟ್ಟಿಗೆ ಸಂಬಂಧಿಸಿದ ಹಕ್ಕು ಮತ್ತು ಆಕ್ಷೇಪಣೆಗಳು ಇದ್ದಲ್ಲಿ ರಾಜಕೀಯ ಪಕ್ಷದ ಮುಖಂಡರು, ಸಂಬಂಧಪಟ್ಟ ಮತಗಟ್ಟೆ ಮಟ್ಟದ ಅಧಿಕಾರಿಗಳಿಗೆ ಸಲ್ಲಿಸಬಹುದಾಗಿದೆ ಎಂದು ಮಾಹಿತಿ ನೀಡಿದರು.

೨೦೨೬ ರ ಜನವರಿ ೧ ರಂದು ಅರ್ಹತಾ ದಿನಾಂಕವನ್ನಾಧರಿಸಿ ಮತದಾರರ ಪಟ್ಟಿಯಲ್ಲಿ ಹೊಸದಾಗಿ ನೋಂದಣಿ ಮಾಡಿಕೊಳ್ಳಲಾಗುತ್ತಿದೆ. ಇದರ ಜೊತೆಗೆ ತಿದ್ದುಪಡಿ, ವರ್ಗಾವಣೆ ಕಾರ್ಯ ಸಹ ನಡೆಯಲಿದೆ. ೨೦೨೬ ಜನವರಿ ೩ ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುತ್ತಿದ್ದು, ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಲು ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಜನವರಿ ೩ ರಿಂದ ೨೪ ರ ವರೆಗೆ ಕಾಲಾವಕಾಶ ನೀಡಲಾಗಿದೆ. ಫೆಬ್ರವರಿ ೨೪ ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುವುದು ಎಂದು ಜಿಲ್ಲಾಧಿಕಾರಿ ತಿಳಿಸಿದರು.

***************

ಸರ್ಕಾರಿ ಕಚೇರಿ, ಖಾಸಗಿ ಕಚೇರಿ, ಬ್ಯಾಂಕ್‌ಗಳು ಮತ್ತು ಇನ್ನಿತರೆ ಸಂಸ್ಥೆಗಳಿಗೆ ಸ್ವ-ಸಹಾಯ ಸಂಘದಿಂದ ತಯಾರಿಸಿದ ಶುಚಿ, ರುಚಿಯಾದ, ರಾಸಾಯನಿಕ ಮುಕ್ತವಾದ, ಪೌಷ್ಠಿಕಾಂಶಯುಕ್ತ ಆಹಾರದ ಡಬ್ಬಿಗಳನ್ನು ತಲುಪಿಸಲು ಪ್ರಾರಂಭಿಸಲಾಗುತ್ತಿರುವ “ಅಕ್ಕನ ಬುತ್ತಿ” ಆಹಾರ ತಯಾರಿಕಾ ಕೇಂದ್ರದ ಪ್ರಚಾರ ಕಾರ್ಯಕ್ಕೆ ಮಂಡ್ಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ನಂದಿನಿ ಚಾಲನೆ ನೀಡಿದರು.

ಸ್ವ-ಸಹಾಯ ಸಂಘದ ಮಹಿಳೆ ಸುಧಾಮಣಿ ಮಾತನಾಡಿ, ವಾರದ ಆರು ದಿನವೂ ಮಧ್ಯಾಹ್ನದ ಊಟ ಲಭ್ಯವಿರಲಿದ್ದು, ಪ್ರತಿ ದಿನ ವಿಭಿನ್ನ ರೀತಿಯ ಆಹಾರ ನೀಡಲಾಗುತ್ತದೆ ಎಂದು ಹೇಳಿದರು.

***************

ಅಂತಾರಾಷ್ಟ್ರೀಯ ವಾಣಿಜ್ಯ ಮೇಳದ ಅಂಗವಾಗಿ ಸಿರಿಧಾನ್ಯ ಹಾಗೂ ಮರೆತು ಹೋದ ಖಾದ್ಯಗಳ ಪಾಕ ಸ್ಪರ್ಧೆಯನ್ನು ೨೦೨೬ರ ಜನವರಿ ೩ ರಂದು ಕೋಲಾರದ ಜಂಟಿ ಕೃಷಿ ನಿರ್ದೇಶಕರ ಕಚೇರಿಯ ಸಮಗ್ರ ಕೃಷಿ ಪದ್ಧತಿ ಶ್ರೇಷ್ಠತಾ ಕೇಂದ್ರದ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಈ ಸ್ಪರ್ಧೆಯಲ್ಲಿ ಜಿಲ್ಲೆಯ ಸಾರ್ವಜನಿಕರು ಭಾಗವಹಿಸಬಹುದಾಗಿದ್ದು, ವಿದ್ಯಾರ್ಥಿಗಳು ಹಾಗೂ ಕೃಷಿ ಇಲಾಖೆಯ ಅಧಿಕಾರಿ, ಸಿಬ್ಬಂದಿಗೆ ಅವಕಾಶವಿರುವುದಿಲ್ಲ. ಸಿರಿಧಾನ್ಯ ಹಾಗೂ ಮರೆತು ಹೋದ ಖಾದ್ಯಗಳ ಸಸ್ಯಾಹಾರಿ ತಿನಿಸುಗಳಿಗೆ ಮಾತ್ರ ಅವಕಾಶ ನೀಡಲಾಗಿದ್ದು, ಪ್ರತಿ ಸ್ಪರ್ಧಿಗೆ ಒಂದೇ ತಿನಿಸನ್ನು ಪ್ರದರ್ಶಿಸಲು ಅವಕಾಶವಿರುತ್ತದೆ.

ಜಿಲ್ಲಾ ಮಟ್ಟದಲ್ಲಿ ಆಯ್ಕೆಯಾಗುವ ಸಿಹಿ, ಖಾರ ಸಿರಿಧಾನ್ಯ ಹಾಗೂ ಮರೆತು ಹೋದ ಖಾದ್ಯ ವಿಭಾಗಗಳಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ಬಹುಮಾನವಾಗಿ ಕ್ರಮವಾಗಿ ೫ ಸಾವಿರ, ೩ ಸಾವಿರ ಹಾಗೂ ೨ ಸಾವಿರ ರೂಪಾಯಿ ನಗದು ಬಹುಮಾನ ನೀಡಲಾಗುತ್ತದೆ. ಪಾಕ ಸ್ಪರ್ಧೆಯಲ್ಲಿ ಭಾಗವಹಿಸಲು ಇಚ್ಛಿಸುವವರು ಜನವರಿ ೧ ರೊಳಗೆ ಹೆಸರನ್ನು ನೋಂದಾಯಿಸಿಕೊಳ್ಳಬೇಕು ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

***************

ವಿಕಸಿತ ಭಾರತ, ಜಿ ರಾಮ್ ಜಿ ಯೋಜನೆಯಡಿ ಕೊಪ್ಪಳ ಜಿಲ್ಲೆಯ ಕುಕನೂರು ತಾಲೂಕಿನ ಬನ್ನಿಕೊಪ್ಪ ಗ್ರಾಮ ಪಂಚಾಯತಿಯಲ್ಲಿ ಉತ್ತಮ ಕೆಲಸ ಮಾಡುವುದರೊಂದಿಗೆ, ಇಪ್ಪತ್ತೈದು ದಿನ ಕೂಲಿ ಹೆಚ್ಚಿಸಿರುವುದು ರೈತರಿಗೆ, ಬಡ ಕೂಲಿ ಕಾರ್ಮಿಕರಿಗೆ ಉಪಯೋಗವಾಗಿದೆ.

ಜಿ ರಾಮ್ ಜಿ ಯೋಜನೆಯಡಿ ಗ್ರಾಮಕ್ಕೆ ಕುಡಿಯುವ ನೀರು ಒದಗಿಸುವ ಅಮೃತ ಸರೋವರ ಯೋಜನೆಯಡಿ ಬನ್ನಿಕೊಪ್ಪ ಗ್ರಾಮದಲ್ಲಿ ಕೆರೆಯ ಅಭಿವೃದ್ಧಿ, ಹೊಲ, ರಸ್ತೆ ಬದು ನಿರ್ಮಾಣ, ದನದ ಕೊಟ್ಟಿಗೆ ನಿರ್ಮಾಣ ಕಾಮಗಾರಿಗಳನ್ನು ಮಾಡಲಾಗಿದೆ ಎಂದು ಬನ್ನಿಕೊಪ್ಪ ಗ್ರಾಮ ಪಂಚಾಯತಿ ಅಧ್ಯಕ್ಷರಾದ ನಾಗರಾಜ ವೆಂಕಟಾಪುರ ತಿಳಿಸಿದ್ದಾರೆ.

ಬೈಟ್:- ನಾಗರಾಜ

ಕಳೆದ ವರ್ಷ ನೂರು ದಿನ ಕೆಲಸ ಮಾಡಿದ್ದೇವೆ. ಈ ವರ್ಷ ೧೨೫ ದಿನ ಕೂಲಿ ಕೆಲಸ ಮಾಡುವುದರಿಂದ ಆರ್ಥಿಕ ಸ್ಥಿತಿ ಮತ್ತಷ್ಟು ಸುಧಾರಿಸಲಿದೆ. ಸ್ಥಳೀಯವಾಗಿ ಉದ್ಯೋಗ ದೊರೆತ ಹಿನ್ನೆಲೆಯಲ್ಲಿ ಗುಳೆ ತಪ್ಪಿದೆ ಎಂದು ಫಲಾನುಭವಿ ಕಾರ್ಮಿಕ ಅಮರೇಶಪ್ಪ ಹೇಳಿದ್ದಾರೆ.

***************

ರಾಮನಗರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ

ಪರಿಹಾರ ಆಯೋಗ ಹಾಗೂ ಕನಕಪುರದ ಜಿಲ್ಲಾ ಗ್ರಾಹಕರ ಮಾಹಿತಿ ಕೇಂದ್ರದ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಗ್ರಾಹಕ ದಿನಾಚರಣೆ ೨೦೨೫ ಕಾರ್ಯಕ್ರಮವನ್ನು ಕನಕಪುರದ ಕೆಸಿಎಸ್‌ಎಂ ಪ್ಯಾರಾ ಮೆಡಿಕಲ್ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿತ್ತು.

’ಡಿಜಿಟಲ್ ನ್ಯಾಯಾಂಗದ ಮೂಲಕ ಪ್ರಕರಣಗಳ ತ್ವರಿತ ಮತ್ತು ಸಮರ್ಥ ವಿಲೇವಾರಿ’ ಎಂಬ ಘೋಷ ವಾಕ್ಯದಡಿ ನಡೆದ ಈ ಕಾರ್ಯಕ್ರಮವನ್ನು ಕನಕಪುರದ ಎರಡನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ವಿನಯ್ ವಿಠ್ಠಲ್ ಕುಂದಾಪುರ್ ಉದ್ಘಾಟಿಸಿದರು.

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕಿ ಶಿಲ್ಪಾ ಮಾತನಾಡಿ, ಇತ್ತೀಚೆಗೆ ಕೇಂದ್ರ ಸರ್ಕಾರ, ಡಿಜಿಟಲ್ ನ್ಯಾಯಾಂಗದ ಮೂಲಕ ಪ್ರಕರಣಗಳ ತ್ವರಿತ ಮತ್ತು ಸಮರ್ಥ ವಿಲೇವಾರಿಗೆ ಹೆಜ್ಜೆ ಇಟ್ಟಿದೆ. ಅದರ ಮೂಲಕ ಗ್ರಾಹಕರು ತಾವು ಕುಳಿತಲ್ಲೇ ವ್ಯಾಜ್ಯಗಳನ್ನು ಪರಿಹರಿಸಿಕೊಳ್ಳಬಹುದು, ಅಲೆದಾಡುವ ಪ್ರಮೇಯವೂ ಇರುವುದಿಲ್ಲ. ಕಾಗದ ರಹಿತವಾಗಿ ವ್ಯಾಜ್ಯಗಳ ಪರಿಹಾರಕ್ಕೆ ಕಾನೂನು ಹೋರಾಟ ಮಾಡಬಹುದು ಎಂದು ಮಾಹಿತಿ ನೀಡಿದರು.

*******ಮುಕ್ತಾಯ*******